# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಸಾ&ಅ:ಸುತ್ತೋಲೆ:2022-23 | 1709 ದಿನಾಂಕ:02.08.2022

## : ಸುತ್ತೋಲೆ :

ವಿಷಯ: "ಅಮೃತ ಭಾರತ" ಕಾರ್ಯಕ್ರಮದಡಿ ಆಯೋಜಿಸಲಾಗಿರುವ ದೇಶಭಕ್ತಿ ಗೀತೆ ಗಾಯನ ಸ್ಪರ್ಧೆ, ನೃತ್ಯ ಸ್ಪರ್ಧೆ ಹಾಗೂ ದೇಶಕ್ಕಾಗಿ ನಡಿಗೆಯಲ್ಲಿ ಭಾಗವಹಿಸುವ ಕುರಿತು.

ಉಲ್ಲೇಖ: 1. ಶ್ರೀ ಜಿ.ಎಸ್. ಬಸವರಾಜ್, ಅಧ್ಯಕ್ಷರು, ರಾಷ್ಟ್ರೀಯ ಮಾನವ–ಪರಿಸರ ಸಂರಕ್ಷಣಾ ಪಡೆ ಇವರ ಮನವಿ ಪತ್ರ ದಿನಾಂಕ:21.07.2022

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:02.08.2022

* * * * *

ರಾಷ್ಟ್ರೀಯ ಮಾನವ–ಪರಿಸರ ಸಂರಕ್ಷಣಾ ಪಡೆ, ತುಮಕೂರು ವತಿಯಿಂದ 75ನೇ ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವದ ಪ್ರಯುಕ್ತ ತುಮಕೂರು ನಗರದಲ್ಲಿ "ಅಮೃತ ಭಾರತ" ಎಂಬ ರಾಷ್ಟ್ರ ಜಾಗೃತ ಅಭಿಯಾನ ಆರಂಭಿಸಲಾಗಿದ್ದು, ಈ ಸಂಬಂಧ ದಿನಾಂಕ:06.08.2022 ರ ಶನಿವಾರದಂದು ತುಮಕೂರು ನಗರದ ಅಶೋಕ ರಸ್ತೆಯಲ್ಲಿರುವ ಸರ್ಕಾರಿ ಎಂಪ್ರೆಸ್ ಕಾಲೇಜಿನಲ್ಲಿರುವ ಸಭಾಂಗಣದಲ್ಲಿ ಬೆಳಿಗ್ಗೆ 10.30 ಕ್ಕೆ ದೇಶಭಕ್ತಿ ಗೀತೆ ಗಾಯನ ಸ್ಪರ್ಧೆ ಹಾಗೂ ನೃತ್ಯ ಸ್ಪರ್ಧೆ ಆಯೋಜನೆ ಹಾಗೂ ದಿನಾಂಕ:13.08.2022 ರ ಶನಿವಾರದಂದು ಬೆಳಿಗ್ಗೆ 7.00 ಗಂಟೆಗೆ ತುಮಕೂರು ನಗರದ ಬಿ.ಹೆಚ್. ರಸ್ತೆಯಲ್ಲಿರುವ ಸರ್ಕಾರಿ ಕಾಲೇಜು ಮೈದಾನದಿಂದ ಅಶೋಕ ರಸ್ತೆ ಮಾರ್ಗವಾಗಿ ಅಮಾನಿಕೆರೆ ಗಾಜಿನ ಮನೆವರೆಗೂ ದೇಶಕ್ಕಾಗಿ ನಡಿಗೆ (ವಾಕಥಾನ್) ಆಯೋಜಿಸಲಾಗಿದ್ದು, ಸೂಚಿತ ದೇಶಭಕ್ತಿ ಗೀತೆ ಗಾಯನ ಸ್ಪರ್ಧೆ ಹಾಗೂ ನೃತ್ಯ ಸ್ಪರ್ಧೆಗೆ ತಮ್ಮ ಕಾಲೇಜಿನ ಆಸಕ್ತ ವಿದ್ಯಾರ್ಥಿಗಳು ನೊಂದಣಿ ಮಾಡಿಕೊಳ್ಳಲು ಮತ್ತು ದಿನಾಂಕ:13.08.2022 ರಂದು ಆಯೋಜಿಸಿರುವ ದೇಶಕ್ಕಾಗಿ ನಡಿಗೆ (ವಾಕಥಾನ್) ಯಲ್ಲಿ ತಮ್ಮ ಕಾಲೇಜಿನ ವಿದ್ಯಾರ್ಥಿಗಳು ಕಡ್ಡಾಯವಾಗಿ ಭಾಗವಹಿಸಲು ಅಗತ್ಯ ಕ್ರಮವಹಿಸುವಂತೆ ಕೋರಿದೆ.

ನಡಿಗೆಯಲ್ಲಿ ಭಾಗವಹಿಸುವವರಿಗೆ ಪ್ರಶಂಸನಾ ಪತ್ರ, ಟೀ ಶರ್ಟ್ ಹಾಗೂ ಉಪಹಾರ ವಿತರಿಸಲಾಗುತ್ತಿದ್ದು, ಹೆಚ್ಚಿನ ಮಾಹಿತಿಗಾಗಿ ರಾಷ್ಟ್ರೀಯ ಮಾನವ–ಪರಿಸರ ಸಂರಕ್ಷಣಾ ಪಡೆಯ ಪತ್ರವನ್ನು ಈ ಸುತ್ತೋಲೆಯೊಂದಿಗೆ ಒದಗಿಸಲಾಗಿದೆ.

ಆದೇಶದ ಮೇರೆಗೆ,

02/08/2022

ಉಪಕುಲಸಚಿವರು

ಉಪಕುಲಸಚಿವರು
(ಸಾಮಾನ್ಯ ವಿಭಾಗ)
ತುಮಕೂರು ವಿಶ್ವವಿದ್ಯಾನಿಲಯ

ಗೆ

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು.
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು.
4. ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಸಂಯೋಜಕರು, ಶಿರಾ ಸ್ನಾತಕೋತ್ತರ ಕೇಂದ್ರ, ಶಿರಾ.
6. ಸಂಯೋಜಕರು, ತಿಪಟೂರು ಸ್ನಾತಕೋತ್ತರ ಕೇಂದ್ರ, ತಿಪಟೂರು.

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ವಿವಿ ಜಾಲತಾಣದಲ್ಲಿ ಭಿತ್ತರಿಸುವಂತೆ ಹಾಗೂ ಸ್ನಾತಕೋತ್ತರ ವಿಭಾಗಗಳು, ಘಟಕ ಹಾಗೂ ಸಂಯೋಜಿತ ಕಾಲೇಜುಗಳಿಗೆ ಸಂದೇಶವನ್ನು ಕಳುಹಿಸುವಂತೆ ಸೂಚಿಸಿದೆ)
3. ಕಚೇರಿ ಪ್ರತಿ.

"ಲೋಕಹಿತಂ ಮಮಕರಣೀಯಂ"

Reg. No.: TMK-4-00591-21-22

# ರಾಷ್ಟ್ರೀಯ ಮಾನವ-ಪರಿಸರ ಸಂರಕ್ಷಣಾ ಪಡೆ

## NATIONAL HUMAN ENVIRONMENTAL PROTECTION FORCE

Reg. under NGO Darpana, NITI Aayog, Govt. of India with Unique ID: KA/2022/0315422

#11, 'ಶ್ರೀರಂಗ', 1ನೇ ಮುಖ್ಯರಸ್ತೆ, 1ನೇ ಕ್ರಾಸ್, ಟಿ.ಪಿ.ಕೆ. ರೋಡ್, ರಾಘವೇಂದ್ರ ನಗರ, ತುಮಕೂರು-572103

Ref. No: Date:

ಸ್ವಾತಂತ್ರ್ಯದ ಅಮೃತ ಮಹೋತ್ಸವ

ರವರಿಗೆ,

ಪ್ರೊ|| ಎಂ. ವೆಂಕಟೇಶ್ವರುಲು ಅವರು,
ಉಪ ಕುಲಪತಿಗಳು,
ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಮಾನ್ಯರೇ,

ವಿಷಯ: 'ಅಮೃತ ಭಾರತ' ಕಾರ್ಯಕ್ರಮದಡಿ ಆಯೋಜಿಸಲಾಗಿರುವ 'ದೇಶಭಕ್ತಿ ಗೀತೆ ಗಾಯನ ಸ್ಪರ್ಧೆ, ದೇಶಭಕ್ತಿ ಗೀತೆಗಳಿಗೆ ನೃತ್ಯ ಸ್ಪರ್ಧೆ ಹಾಗೂ ದೇಶಕ್ಕಾಗಿ ನಡಿಗೆ (ವಾಕಥಾನ್)'ನಲ್ಲಿ ತುಮಕೂರು ವಿಶ್ವವಿದ್ಯಾನಿಲಯದ ಕಾಲೇಜುಗಳು ಭಾಗವಹಿಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 75ನೇ ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವದ ಪ್ರಯುಕ್ತ ತುಮಕೂರು ನಗರದಲ್ಲಿ **'ಅಮೃತ ಭಾರತ'** ಎಂಬ ರಾಷ್ಟ್ರ ಜಾಗೃತ ಅಭಿಯಾನ ಆಯೋಜಿಸಲಾಗಿದೆ.

ದಿನಾಂಕ: 6-8-2022ರ ಶನಿವಾರದಂದು ತುಮಕೂರು ನಗರದ ಅಶೋಕ ರಸ್ತೆಯಲ್ಲಿರುವ ಸರ್ಕಾರಿ ಎಂಪ್ರೆಸ್ ಕಾಲೇಜಿನಲ್ಲಿರುವ ಸಭಾಂಗಣದಲ್ಲಿ ಬೆಳಿಗ್ಗೆ 10.30ಕ್ಕೆ **ದೇಶಭಕ್ತಿ ಗೀತೆ ಗಾಯನ ಸ್ಪರ್ಧೆ ಹಾಗೂ ನೃತ್ಯ ಸ್ಪರ್ಧೆ ಆಯೋಜನೆ** ಹಾಗೂ ದಿನಾಂಕ 13-8-2022ರ ಶನಿವಾರದಂದು ಬೆಳಿಗ್ಗೆ 7.00 ಗಂಟೆಗೆ ತುಮಕೂರು ನಗರದ ಬಿ.ಹೆಚ್. ರಸ್ತೆಯಲ್ಲಿರುವ ಸರ್ಕಾರಿ ಕಾಲೇಜು ಮೈದಾನದಿಂದ ಅಶೋಕ ರಸ್ತೆ ಮಾರ್ಗವಾಗಿ ಅಮಾನಿಕೆರೆ ಗಾಜಿನ ಮನೆವರೆಗೂ **ದೇಶಕ್ಕಾಗಿ ನಡಿಗೆ (ವಾಕಥಾನ್)** ಆಯೋಜಿಸಲಾಗಿದೆ. ಭಾಗವಹಿಸುವವರಿಗೆ ಉಪಾಹಾರ, ಟೀ-ಶರ್ಟ್ ಹಾಗೂ ಪ್ರಶಂಸನಾ ಪತ್ರ ವಿತರಿಸಲಾಗುವುದು.

ತಾವುಗಳು ತುಮಕೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಬರುವಂತಹ ಕಾಲೇಜು ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಎಲ್ಲಾ ಕಾಲೇಜುಗಳಿಗೆ ನಿರ್ದೇಶಿಸಬೇಕಾಗಿ ತಮ್ಮಲ್ಲಿ ಈ ಮೂಲಕ ಸವಿನಯ ಮನವಿ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

( ಜಿ.ಎಸ್. ಬಸವರಾಜು )
ಅಧ್ಯಕ್ಷರು

**ನೃತ್ಯ ಸ್ಪರ್ಧೆ ಸಂಪರ್ಕ:**

ಡಾ. ಅರವಿಂದ್ - 9008115952
ಸ್ನೇಕ್ ದೀಪು - 8880882868
ಶ್ರೀಮತಿ ರೇಖಾ ಕುಮಾರ್ - 9844768354
ಶ್ರೀಮತಿ ಪ್ರತಿಮಾ ಹೆಬ್ಬಾರ್ - 9481061409
ಶ್ರೀಮತಿ ಸ್ವಪ್ನ ಡಾ|| ಸಂಜಯ್ ರಾಜ್ - 9740276134

**ಗಾಯನ ಸ್ಪರ್ಧೆ ಸಂಪರ್ಕ:**

ಶ್ರೀಮತಿ ಲತಾ ಬಾಬು - 9886330661
ಶ್ರೀಮತಿ ಪಲ್ಲವಿ ಅಶ್ವಿನ್ - 7259982904
ಶ್ರೀಮತಿ ರೂಪ ವಿನಯ್ - 7619178862
ಶ್ರೀಮತಿ ಲಕ್ಷ್ಮೀ ಶರ್ಮಾ - 9449306327
ಜೈಶಂಕರ್ - 9448660545

ದಿನಾಂಕ: 21-7-2022